ಅ)

1. ಬೆಳ್ತಂಗಡಿ ತಾಲ್ಲೂಕಿನಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೇಡ್–1 ಮತ್ತು ಗ್ರೇಡ್–2 ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ಸಂಖ್ಯೆ–43
2. 2008–09ನೇ ಸಾಲಿನಲ್ಲಿ ಪಾವತಿಸಲಾದ ವೇತನ ರೂ.36,87,541.00
3. 2008–09ನೇ ಸಾಲಿನಲ್ಲಿ ಪಾವತಿಸಲಾದ ಪ್ರಯಾಣ ಭತ್ಯೆ ರೂ.2,32,974.00 ಮತ್ತು ಇತರೆ ಭತ್ಯೆ ರೂ.47,237.00

610 ಶ್ರೀ ಪುಟ್ಟರಾಜು ಸಿ.ಎಸ್. : ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯ ಮೇಲುಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯ್ತಿಗಳ ಕೇಂದ್ರ ಸ್ಥಾನಗಳೆಷ್ಟು; ಈ ಪಂಚಾಯ್ತಿಗಳಿಗೆ ಗ್ರಂಥಾಲಯಗಳ ಸೌಲಭ್ಯಗಳನ್ನು ಒದಗಿಸಲಾಗಿದೆಯೇ; ಹಾಗಿಲ್ಲದಿದ್ದಲ್ಲಿ ಕಾರಣಗಳೇನು?

ಆ) ಪ್ರತಿ ಪಂಚಾಯ್ತಿಗೆ ಗ್ರಂಥಾಲಯಗಳ ಸೌಲಭ್ಯವನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸದರಿ ಗ್ರಾಮ ಪಂಚಾಯ್ತಿಗಳಿಗೆ ಗ್ರಂಥಾಲಯ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಶಿವನಗೌಡ ನಾಯಕ್ (ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಸಚಿವರು) :

ಅ) 24

ಒದಗಿಸಲಾಗಿದೆ.

ಆ) ಈಗಾಗಲೇ ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಗ್ರಂಥಾಲಯ ವ್ಯವಸ್ಥೆ ಒದಗಿಸಲಾಗಿದೆ.